ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
Bruhat Bengaluru Mahanagara Palike

ಅಧೀಕ್ಷಕ ಅಭಿಯಂತರವರ ಕಛೇರಿ, ದಾಸರಹಳ್ಳಿ ವಲಯ,
ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ಸಂಖ್ಯೆ: ಅ.ಅ.(ದಾ)/ತಾ.ಮ./ 61 /2020-21 ದಿನಾಂಕ: 14/9/2020

"ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :- Improvements and Re Asphalting pipeline S M road to S ramesh road in Dasarahalli ward no 15 ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :- **ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಕಾ.ಪಾ.ಅ./ಆ.ಅ/94/2020-21, ದಿನಾಂಕ: 04.07.2020.**

ಪ್ರಸ್ತಾವನೆ:-

ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು **ರೂ.40.00 ಲಕ್ಷಗಳ** ಮೊತ್ತಕ್ಕೆ ತಯಾರಿಸಿ, ಉಲ್ಲೇಖದಂತೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸದರಿ Improvements and Re Asphalting pipeline S M road to S ramesh road in Dasarahalli ward no 15ರ ಕಾಮಗಾರಿಯ ಅಂದಾಜು ಮೊತ್ತ **ರೂ.40.00 ಲಕ್ಷಗಳ** ಮೊತ್ತಕ್ಕೆ 2019-20ನೇ ಸಾಲಿನ ಆಯವ್ಯಯ P-3726ರಲ್ಲಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಜಾಬ್ ಸಂಖ್ಯೆ 015-20-000108 ನೀಡಲಾಗಿರುತ್ತದೆ. ಸದರಿ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ **ಕ್ರಮ ಸಂಖ್ಯೆ:-61**, ಮತ್ತು **ಪುಟ ಸಂಖ್ಯೆ:-28**, ರಲ್ಲಿ ನೊಂದಾಯಿಸಿ **ರೂ.40.00 ಲಕ್ಷಗಳಿಗೆ** ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :-

1. ಪ್ರಸ್ತಾಪಿತ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ವಿಶಿಷ್ಟ ವಿವರಣೆ / ವಿಶಿಷ್ಟತೆ ಸ್ಥಳಕ್ಕೆ ಅನುಗುಣವಾಗಿರುವುದರ ಬಗ್ಗೆ.
2. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ಪ್ರಕಾರ ಕಾಮಗಾರಿಯ ಟೆಂಡರ್ ಕರೆಯುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
3. ಪ್ರಸ್ತಾಪಿತ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡಿರುವ ಅನುಪಯುಕ್ತ (Debris) ವಸ್ತುಗಳ ಸಾಗಾಣಿಗೆ ಪೂರಕವಾಗಿ ವಲಯ ವ್ಯಾಪ್ತಿಯ ಅನುಮೋದಿತ (Notified Dumping Yard)ಗೆ ಅನುಗುಣವಾಗಿ ಕಾಮಗಾರಿಯನ್ನು ನಿರ್ವಹಿಸುವ ಸ್ಥಳದಿಂದ Dumping Yard ಗೆ ಇರುವ ಅಂತರಕ್ಕೆ ಸಂಬಂಧಿಸಿದಂತೆ Lead Chart ನ್ನು ತಯಾರಿಸಿ ಅನುಮೋದನೆ ಪಡೆದುಕೊಳ್ಳುವ ಬಗ್ಗೆ.
4. ಕಾಮಗಾರಿಯನ್ನು Indian Standard (I.S) ಮಾರ್ಗ ಸೂಚಿಗಳಂತೆ, ನಿಗಧಿತ ವಿಶಿಷ್ಟ ವಿವರಣೆ (Standard Specification) ಯಂತೆ ನಿರ್ವಹಿಸುವುದು ಹಾಗೂ ನಿಗಧಿಪಡಿಸಿರುವ ಪ್ರಯೋಗಗಳನ್ನು ಕೈಗೊಂಡು ಗುಣಮಟ್ಟವನ್ನು ಕಾಯ್ದುಕೊಂಡು ಕಾಮಗಾರಿಯನ್ನು ನಿರ್ವಹಿಸತಕ್ಕದ್ದು.

ಪು.ತಿ.ನೋ

Scanned with Oken Scanner

-2-

5. ಮಣ್ಣಿನ ಪರೀಕ್ಷೆ ಮಾಡಿಸುವುದು (ಅವಶ್ಯವಿದ್ದಲ್ಲಿ).
6. ನಿಗದಿಯಾದ ದರಪಟ್ಟಿಯಲ್ಲಿಲ್ಲದ ದರಗಳಿಗೆ (Data Rate) ಮತ್ತು ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯ ತಕ್ಕದ್ದು ಹಾಗೂ ಅಂದಾಜಿನಲ್ಲಿ ನಮೂದಿಸಿರುವ ಸಾನ್ ಎಸ್.ಆರ್.ಐಟಂಗಳನ್ನು Standard Specification ಪ್ರಕಾರ ಗುಣಾತ್ಮಕವಾಗಿ ನಿರ್ವಹಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
7. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇಡಗಂಟು ರೂಪದಲ್ಲಿ ಒದಗಿಸಲಾಗಿರುವ (Lump Sum Provisions) ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯ ತಕ್ಕದ್ದು.
8. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW - 1/2/3/4 ಹಾಗೂ ಆಗಿಂದಾಗ್ಗೆ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
9. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ MAS ನ ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.
10. ಪ್ರಸ್ತಾಪಿತ ಕಾಮಗಾರಿಗೆ ಸಂಬಂಧಿಸಿದ ನಕ್ಷೆಯಂತೆ ವಿನ್ಯಾಸಗಳನ್ನು ಪಡೆದು ಕಾಮಗಾರಿಯನ್ನು ನಿರ್ವಹಿಸುವ ಬಗ್ಗೆ.
11. ಕಂಡಿಕೆ ( )ರ ವರದಿಯನ್ವಯ ಪ್ರಸ್ತಾಪಿತ ಕಾಮಗಾರಿಯ ಅಂದಾಜು ಪಟ್ಟಿ / ಡಿ.ಟಿ.ಎಸ್. ಗೆ ಅನುಮೋದನೆ ನೀಡಲಾಗಿದ್ದು. ಸದರಿ ಅನುಮೋದನೆಯು ಪ್ರಸ್ತಾಪಿತ ಕಾಮಗಾರಿಯನ್ನು ಮೆ॥ಕೆ.ಆರ್.ಐ.ಡಿ.ಎಲ್.ಸಂಸ್ಥೆಯಿಂದ ನಿರ್ವಹಿಸುವ ಬಗ್ಗೆ ಸಕ್ಷಮ ಪ್ರಾಧಿಕಾರ/ ಸ್ಥಾಯಿ ಸಮಿತಿಯ ಅನುಮೋದನೆ ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ.
12. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಕಾಮಗಾರಿಯ ಟೆಂಡರ್‌ನಲ್ಲಿ ಭಾಗವಹಿಸುವ ಬಗ್ಗೆ ಮಾನ್ಯ ಆಯುಕ್ತರವರ ದಿನಾಂಕ:02/11/2017ರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಆ./ಪಿ.ಆರ್/5054/2017-18 ರಂತೆ ಕ್ರಮವಹಿಸುವುದು.

ಅಧೀಕ್ಷಕ ಅಭಿಯಂತರರು (ದಾಸರಹಳ್ಳಿ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

1. ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with Oken Scanner